ಶ್ರೀ 125

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ರವರ ನಿಯಮ 330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹೇಳಿಕೆ

**ಸೂಚನೆ:**

**ರಾಜ್ಯದಲ್ಲಿ ಪಶುಸಂಗೋಪನೆ ಮತ್ತು ಹೈನುಗಾರಿಕೆ ಚಟುವಟಿಕೆಗಳ ಬೆನ್ನೆಲುಬಾಗಿ ಕೆಲಸ ಮಾಡಬೇಕಾದ ಪಶುಸಂಗೋಪನೆ ಇಲಾಖೆಗೆ ಮಂಜೂರಾಗಿರುವ ಒಟ್ಟು ಹುದ್ದೆಗಳ ಪೈಕಿ ಸರಿ ಸುಮಾರು ಅರ್ದದಷ್ಟು ಹುದ್ದೆಗಳು ಖಾಲಿ ಇರುವುದರಿಂದ ರಾಜ್ಯಾದ್ಯಂತ ರೈತರಿಗೆ ಸರಿಯಾದ ಸೇವೆಗಳು ಲಭ್ಯವಾಗದಿರುವ ಬಗ್ಗೆ ಮತ್ತು ರೈತರು ದಿನನಿತ್ಯ ಜಾನುವಾರುಗಳಿಗೆ ತಿನಿಸುವ ಮೇವು, ಹಿಂಡಿ, ಬೂಸ, ಜೋಳದ ಹಿಟ್ಟು, ಕಡಲೆಹೊಟ್ಟು ಇತ್ಯಾದಿಗಳ ಬೆಲೆ ಗಗನಕ್ಕೇರಿರುವುದರಿಂದ ರೈತರಿಗೆ ಆಗುತ್ತಿರುವ ತೊಂದರೆಗಳ ಕುರಿತು ಮಾನ್ಯ ಪಶುಸಂಗೋಪನೆ ಸಚಿವರ ಬಳಿ ವಿಷಯವನ್ನು ಪ್ರಸ್ತಾಪಿಸುವ ಕುರಿತು.**

**ಹೇಳಿಕೆ:**

ರಾಜ್ಯದಲ್ಲಿ ಪಶುಸಂಗೋಪನೆ ಮತ್ತು ಹೈನುಗಾರಿಕೆ ಚಟುವಟಿಕೆಗಳ ಬೆನ್ನೆಲುಬಾಗಿ ಕೆಲಸ ಮಾಡಬೇಕಾದ ಪಶುಸಂಗೋಪನೆ ಇಲಾಖೆಗೆ ಮಂಜೂರಾಗಿರುವ ಒಟ್ಟು ಹುದ್ದೆಗಳ ಪೈಕಿ ಸರಿ ಸುಮಾರು ಅರ್ಧದಷ್ಟು ಹುದ್ದೆಗಳು ಖಾಲಿ ಇದ್ದು, ರಾಜ್ಯಾದ್ಯಂತ ರೈತರಿಗೆ ತೊಂದರೆಯಾಗದಂತೆ ಖಾಲಿಯಿರುವ ಹುದ್ದೆಗಳಿಗೆ ಎದುರಾಗಿ ಅಧಿಕ ಪ್ರಭಾರ ವ್ಯವಸ್ಥೆ ಮಾಡಲಾಗಿದೆ. ಇಲಾಖೆಯಲ್ಲಿ ಖಾಲಿ ಇರುವ ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾದ ಮುಖ್ಯ ಪಶುವೈದ್ಯಾಧಿಕಾರಿ ಹಾಗೂ ಹಿರಿಯ ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ಕಾಲಬದ್ಧ ಬಡ್ತಿ ಮೂಲಕ ಭರ್ತಿಗೆ ಕ್ರಮವಹಿಸಲಾಗಿದೆ. ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ 371(ಜೆ) ರಡಿ 47 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಮುಂದುವರೆದು, ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳ ಪೈಕಿ 400 ಹುದ್ದೆಗಳನ್ನು ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಜಾನುವಾರು ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಮುಂಬಡ್ತಿ ಹುದ್ದೆಗಳಾಗಿದ್ದು, ಈಗಾಗಲೇ 115 ಹುದ್ದೆಗಳಿಗೆ ಜಾನುವಾರು ಅಧಿಕಾರಿ ಹುದ್ದೆಗಳಿಂದ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಲಾಗಿದೆ.

ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ 371(ಜೆ) ರಡಿ ಪಶುವೈದ್ಯಕೀಯ ಪರೀಕ್ಷಕರ 32 ಹುದ್ದೆಗಳನ್ನು ಮತ್ತು ಪಶುವೈದ್ಯಕೀಯ ಸಹಾಯಕರ 83 ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ.

ಖಾಲಿ ಇರುವ ಲಿಪಿಕ ವರ್ಗದ ಹುದ್ದೆಗಳನ್ನು, 'ಡಿ' ದರ್ಜೆ ಮತ್ತು ವಾಹನ ಚಾಲಕರ ಹುದ್ದೆಗಳನ್ನು ಅನುಕಂಪಾರ್ಥ ಅರ್ಹತೆ ಆಧಾರದ ಮೇಲೆ ನೇರನೇಮಕಾತಿ ಮಾಡಲಾಗುತ್ತಿದೆ.

..2

ಇನ್ನುಳಿದಂತೆ ಖಾಲಿ ಇರುವ "ಡಿ" ದರ್ಜೆ ಮತ್ತು ವಾಹನ ಚಾಲಕರ ಹುದ್ದೆಗಳಿಗೆ ಎದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಪಡೆದು ರಾಜ್ಯದ ರೈತರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

**ಜಾನುವಾರುಗಳ ಮೇವು ಹಾಗೂ ಹಿಂಡಿ ಬೂಸದ ಬಗ್ಗೆ:**

ಖಾಸಗಿ ಕ್ಷೇತ್ರದಲ್ಲಿ ಪಶು ಆಹಾರದ ದರ ಕಳೆದ ವರ್ಷಕ್ಕೆ ಹೋಲಿಸಿದರೆ ಸ್ವಲ್ಪ ಹೆಚ್ಚಳವಾಗಿದ್ದು, ಇತ್ತೀಚಿನ ದಿನಗಳಲ್ಲಿ ಪೆಟ್ರೋಲ್, ಡೀಸಲ್ ಬೆಲೆ ತುಟ್ಟಿಯಾಗಿದ್ದು, ಸಾರಿಗೆ ವೆಚ್ಚ ಹಾಗೂ ಪಶು ಆಹಾರ ತಯಾರಿಕೆಗೆ ಬಳಸುವ ಕಚ್ಚಾ ವಸ್ತುಗಳ ಬೆಲೆ ಏರಿಕೆಯಾಗಿರುವುದರಿಂದ ಖಾಸಗಿ ಉತ್ಪಾದಕರು ಪಶು ಆಹಾರದ ಬೆಲೆಯನ್ನು ಹೆಚ್ಚಿಸಿರುವುದು ಕಂಡುಬಂದಿರುತ್ತದೆ.

ಜಾನುವಾರುಗಳಿಗೆ ಉತ್ತಮ ದರ್ಜೆಯ ಹಸಿರು ಮೇವನ್ನು ನೀಡುವುದರಿಂದ ಹಾಲಿನ ಉತ್ಪಾದನೆ ಹೆಚ್ಚಾಗುವುದರ ಜೊತೆಗೆ ಪಶು ಆಹಾರದ ಪ್ರಮಾಣವನ್ನು ಸಹ ಕಡಿಮೆ ಮಾಡಬಹುದಾಗಿದೆ. ಈ ನಿಟ್ಟಿನಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಹೆಚ್ಚು ಹಸಿರು ಮೇವನ್ನು ನೀಡಲು ಅನುಕೂಲವಾಗುವಂತೆ ಹಸಿರು ಮೇವನ್ನು ಬೆಳೆಸಲು, ಮೇವಿನ ಬೀಜದ ವಿವಿಧ ತಳಿಗಳಾದ African tallmaize (ATM), Bajra, Cowpea, Sorgham, Multicutನ ಕಿರು ಪೊಟ್ಟಣಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಕಳೆದ ಎರಡು ವರ್ಷಗಳಲ್ಲಿ ಉಚಿತವಾಗಿ ವಿತರಿಸಲಾದ ಮೇವಿನ ಬೀಜದ ಕಿರುಪೊಟ್ಟಣಗಳ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ. | ವರ್ಷ | ವಿತರಿಸಿದ ಮೇವಿನ ಬೀಜದ ಕಿರುಪೊಟ್ಟಣಗಳ ಸಂಖ್ಯೆ |
|---|---|---|
| 1 | 2020-21 | 133971 |
| 2 | 2021-22 | 109563 |

ಹಾಲು ಪೂರೈಕೆದಾರರಿಗೆ ತೊಂದರೆಯಾಗದಂತೆ ಕೆ.ಎಂ.ಎಫ್ ಪಶು ಆಹಾರದ ಬೆಲೆಯನ್ನು ಪರಿಷ್ಕರಿಸಿರುವುದಿಲ್ಲ.

ಕಳೆದ 3 ವರ್ಷಗಳಿಗೆ ಹೋಲಿಸಿದರೆ ಮೇಲಿನ ಕಾರಣಗಳಿಂದ ಪಶು ಆಹಾರದ ಬೆಲೆ ಹೆಚ್ಚಾಗಿರುವುದು ಕಂಡು ಬಂದಿದೆ. ಅದಕ್ಕನುಗುಣವಾಗಿ ಹಾಲಿನ ಬೆಲೆಯಲ್ಲೂ ಹೆಚ್ಚಳವಾಗಬೇಕಿತ್ತು. ಆದರೆ, ಗ್ರಾಹಕರಿಗೆ ತೊಂದರೆಯಾಗಬಾರದು ಎಂಬ ದೃಷ್ಟಿಯಿಂದ ಹಾಲಿನ ಬೆಲೆ ಹೆಚ್ಚು ಮಾಡಿರುವುದಿಲ್ಲ. ಆದಾಗ್ಯೂ ಸರ್ಕಾರ ಹಾಲು ಉತ್ಪಾದಕರಿಗೆ ಅನುಕೂಲವಾಗಲೆಂದು ಪ್ರತಿ ಲೀಟರ್ ಹಾಲಿಗೆ ರೂ.5/- ರಂತೆ ಪ್ರೋತ್ಸಾಹ ಧನ ನೀಡುತ್ತಿದೆ.

**ಸಂಖ್ಯೆ: ಪಸಂಮೀ ಇ-91 ಪಸಸೇ 2022**

**(ಪ್ರಭು.ಬಿ. ಚವ್ಹಾಣ್)**
ಪಶುಸಂಗೋಪನೆ ಸಚಿವರು